## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 954 |
| ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 14-03-2025 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ರಫ್ತನ್ನು ಉತ್ತೇಜಿಸಲು ರಾಜ್ಯದಲ್ಲಿರುವ ವಿಮಾನ ನಿಲ್ದಾಣಗಳ ಹತ್ತಿರದಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಆಹಾರ ಪಾರ್ಕ್‌ಗಳನ್ನು ಹಾಗೂ ಪ್ರಸಕ್ತ ಸಾಲಿನಲ್ಲಿ ಶಿವಮೊಗ್ಗದ ಸೋಗಾನೆ, ವಿಜಯಪುರದ ಇಟ್ಟಂಗಿ ಹಾಳ ಮತ್ತು ಬೆಂಗಳೂರು ಗ್ರಾಮಾಂತರದ ಪೂಜೇನಹಳ್ಳಿಯಲ್ಲಿ ಸ್ಥಾಪಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾಮಗಾರಿಯನ್ನು ಪ್ರಾರಂಭಿಸಲಾಗಿ ದೆಯೇ ? | ವಿಜಯಪುರದ ಇಟ್ಟಂಗಿಹಾಳ ಮತ್ತು ಶಿವಮೊಗ್ಗದ ಸೋಗಾನೆಯಲ್ಲಿ ಆಹಾರ ಪಾರ್ಕ್ ಸ್ಥಾಪಿಸುವ ಸಂಬಂಧ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸಲು NABCONS ಸಂಸ್ಥೆಗೆ ಕಾರ್ಯಾದೇಶವನ್ನು ನೀಡಲಾಗಿದ್ದು, ಯೋಜನಾ ವರದಿಯನ್ನು ಸಿದ್ಧಪಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಆ) | ಹಾಗಿದ್ದಲ್ಲಿ, ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ: ಈ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದೆಯೇ: ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ: | ಪ್ರಸ್ತುತ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸುವ ಕಾರ್ಯದ ಹಂತದಲ್ಲಿರುವುದರಿಂದ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಿರುವುದಿಲ್ಲ. |
| ಇ) | ಈ ಯೋಜನೆಯನ್ನು ಪೂರ್ಣಗೊಳಿಸಲು ಮೀಸಲಿಟ್ಟಿರುವ ಅನುದಾನ ಎಷ್ಟು; ಸರ್ಕಾರದ ವತಿಯಿಂದ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿ ಸಲಾಗುವುದು ಯಾವಾಗ? (ಮಾಹಿತಿ ನೀಡುವುದು) | ಆಹಾರ ಕರ್ನಾಟಕ ನಿಯಮಿತದ ವತಿಯಿಂದ NABARD ನಲ್ಲಿ ಲಭ್ಯವಿರುವ ಆಹಾರ ಸಂಸ್ಕರಣಾ ನಿಧಿಯಿಂದ (Food Processing Fund) ಸಾಲವನ್ನು ಬಳಸಿಕೊಂಡು ಆಹಾರ ಪಾರ್ಕುಗಳನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಲಾಗಿದ್ದು, ಈ ವರೆವಿಗೂ ಸರ್ಕಾರವು ಈ ಉದ್ದೇಶಕ್ಕಾಗಿ ಯಾವುದೇ ಅನುದಾನವನ್ನು ಮೀಸಲಿಟ್ಟಿರುವುದಿಲ್ಲ. 2022-23ನೇ ಸಾಲಿನಲ್ಲಿ ವಿಜಯಪುರ ಆಹಾರ ಪಾರ್ಕ್ ಸ್ಥಾಪನೆಗಾಗಿ ರೂ.5.00 ಕೋಟಿ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ.<br><br>ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸಿದ ನಂತರ DPR ಅನುಸಾರ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಿದೆ. |

*ಕೃ ಇ 47 ಎಎಂಎಸ್ 2025*

**(ಎನ್.ಚಲುವರಾಯಸ್ವಾಮಿ)**
ಕೃಷಿ ಸಚಿವರು